**All India Radio: Bangalore**
**National Bulletins In Kannada**
**07.08.2025 / 7.35 pm**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**07.08.2025 / 7.35 pm**
**<><*<><>*><>**

**ಮುಖ್ಯಾಂಶಗಳು**

೧. ಸಂಸತ್ತಿನ ಉಭಯ ಸದನಗಳಲ್ಲಿ ಮುಂದುವರೆದ ಗದ್ದಲ; ದಿನದ ಮಟ್ಟಿಗೆ ಕಲಾಪ ಮುಂದೂಡಿಕೆ

೨. ಕರ್ನಾಟಕದ ಮತದಾರರ ಪಟ್ಟಿಯಲ್ಲಿ ಯಾವುದೇ ಲೋಪವಾಗಿಲ್ಲ; ಚುನಾವಣಾ ಆಯೋಗ ಸ್ಪಷ್ಟನೆ

೩. ಉಪರಾಷ್ಟ್ರಪತಿ ಚುನಾವಣೆಗೆ ಇಂದು ಅಧಿಸೂಚನೆ ಜಾರಿ - ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭ

೪. ಅಂತಾರಾಷ್ಟ್ರೀಯ ವೈಸ್ಲಾವ್ ಮಾಣಿಕ್ ಸ್ಮಾರಕ ಟೂರ್ನಿ ; ಭಾರತದ ಜಾವೆಲಿನ್ ಆಟಗಾರ್ತಿ ಅನ್ನು ರಾಣಿಗೆ ಸ್ವರ್ಣ

**><><><><><><><><**

ಸಂಸತ್ತಿನ ಉಭಯ ಸದನಗಳಲ್ಲಿ ಬಿಹಾರದ ವಿಶೇಷ ಮತದಾರರ ಪರಿಷ್ಕರಣೆ ವಿಷಯಕ್ಕೆ ಸಂಬಂಧಿಸಿದಂತೆ ನಡೆದ ಗದ್ದಲದ ಹಿನ್ನೆಲೆಯಲ್ಲಿ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಈ ವಾರದಲ್ಲಿ ನಾಲ್ಕನೇ ದಿನವಾದ ಇಂದು ಸಹ ಯಾವುದೇ ಕಾರ್ಯ ಕಲಾಪಗಳು ಸುಗಮವಾಗಿ ನಡೆಯಲಿಲ್ಲ. ಲೋಕಸಭೆ ಕಲಾಪ ಆರಂಭವಾಗುತ್ತಿದ್ದಂತೆ ಗದ್ದಲ ಮುಂದುವರಿಯಿತು. ಇದೇ ಸಂದರ್ಭದಲ್ಲಿ ಮಣಿಪುರ ಸರಕು ಮತ್ತು ಸೇವಾ ತೆರಿಗೆ ಹಾಗೂ ವಿತ್ತೀಯ ವಿಧೇಯಕಗಳಿಗೆ ಅನುಮೋದನೆ ನೀಡಲಾಯಿತು. ಗದ್ದಲದ ಹಿನ್ನೆಲೆಯಲ್ಲಿ ಕಲಾಪವನ್ನು ನಾಳೆಗೆ ಮುಂದೂಡಲಾಯಿತು. ರಾಜ್ಯಸಭೆ ಕಲಾಪ ಇಂದು ಬೆಳಗ್ಗೆ ಆರಂಭವಾಗುತ್ತಿದ್ದಂತೆ ಉಪ ಸಭಾಪತಿ ಹರಿವಂಶ್ ಅವರು ಸಚಿವರುಗಳಿಗೆ ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಕಾಗದಪತ್ರಗಳ ಮಂಡನೆಗೆ ಅವಕಾಶ ಮಾಡಿಕೊಟ್ಟರು. ಬಳಿಕ ವಿವಿಧ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳು ಪ್ರತ್ಯೇಕವಾಗಿ ತಮ್ಮ ತಮ್ಮ ವರದಿಗಳನ್ನು ಸದನದ ಮುಂದಿಟ್ಟರು. ಆರಂಭದಿಂದಲೇ ಪ್ರತಿಪಕ್ಷಗಳ ಸದಸ್ಯರು ಕಲಾಪವನ್ನು ಬದಿಗೊತ್ತಿ, ಬಿಹಾರದಲ್ಲಿ ನಡೆದಿರುವ ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ವಿವಿಧ ವಿಚಾರಗಳ ಕುರಿತು ಚರ್ಚೆಗೆ ಅವಕಾಶ ಮಾಡಿಕೊಡಬೇಕು ಎಂದು ಪಟ್ಟುಹಿಡಿದು ಪ್ರತಿಭಟನೆ ಮುಂದುವರಿಸಿದರು. ಉಪ ಸಭಾಪತಿ ಅವರು, ಶೂನ್ಯ ವೇಳೆಯಲ್ಲಿ ಸದಸ್ಯರು ತಮ್ಮ ಕ್ಷೇತ್ರಗಳ ಸಮಸ್ಯೆಗಳ ಬಗ್ಗೆ ಚರ್ಚೆಗೆ ಅವಕಾಶ ಮಾಡಿಕೊಡಬೇಕಾಗಿದೆ. ಇಂತಹ ವಿಚಾರಗಳನ್ನು ಪ್ರಸ್ತಾಪಿಸುವುದು ಸದಸ್ಯರ ಹಕ್ಕು ಆಗಿದ್ದು, ಅದಕ್ಕೆ ತೊಂದರೆ ಮಾಡಬಾರದು. ಅದೇ ರೀತಿ ಪ್ರಶ್ನೋತ್ತರ ಕಲಾಪದಲ್ಲೂ ಹಲವು ಮಹತ್ವದ ವಿಚಾರಗಳು ಚರ್ಚೆಗೆ ಬರಲಿವೆ. ಪ್ರತಿಭಟನೆ ಕೈಬಿಟ್ಟು ಸುಗಮ ಕಲಾಪಕ್ಕೆ ಅವಕಾಶ ನೀಡಬೇಕು ಎಂದು ಪದೇ ಪದೇ ಮನವಿ ಮಾಡಿದರು. ಅವರ ಮನವಿಗೆ ಸ್ಪಂದಿಸದ ಪ್ರತಿಪಕ್ಷಗಳ ಸದಸ್ಯರು ಗದ್ದಲ ಎಬ್ಬಿಸಿ ಕಲಾಪಕ್ಕೆ ಅಡ್ಡಿಪಡಿಸಿದ್ದರಿಂದ ಉಪ ಸಭಾಪತಿ ಅವರು ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು. ಬಳಿಕ ಸದನ ಸೇರಿದಾಗ ಸಭಾಪತಿ ಪೀಠದಲ್ಲಿದ್ದ ಘನಶ್ಯಾಮ್ ತಿವಾರಿ ಶಾಸನ ರಚನಾ ಕಲಾಪಕ್ಕೆ ಅನುವು

ಮಾಡಿಕೊಟ್ಟರು. ಬಂದರು, ಹಡಗು ಮತ್ತು ಜಲಮಾರ್ಗಗಳ ಖಾತೆ ಸಚಿವ ಸರ್ಬಾನಂದ ಸೋನೋವಾಲ್, ಕರಾವಳಿಯ ಹಡಗುಯಾನ (ಕೋಸ್ಟಲ್ ಶಿಪ್ಪಿಂಗ್) ಮಸೂದೆ ೨೦೨೫ನ್ನು ಮಂಡಿಸಿ ಅನುಮೋದನೆ ನೀಡುವಂತೆ ಸದಸ್ಯರಿಗೆ ಮನವಿ ಮಾಡಿದರು. ಈ ಹಂತದಲ್ಲಿ ಪ್ರತಿಪಕ್ಷಗಳ ಸದಸ್ಯರ ಪ್ರತಿಭಟನೆ ಮುಂದುವರಿದಿತ್ತು. ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಪ್ರತಿಪಕ್ಷಗಳ ಸದಸ್ಯರು ದೇಶದ ಹಿತದೃಷ್ಟಿಯಿಂದ ಎತ್ತಿರುವ ವಿಚಾರಗಳ ಬಗ್ಗೆ ಚರ್ಚೆಗೆ ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು. ಪ್ರತಿಪಕ್ಷಗಳ ಸದಸ್ಯರು ಗದ್ದಲ ಮುಂದುವರಿಸಿದ್ದರಿಂದ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು, ಸಂಸತ್ ಭವನದಲ್ಲಿ ತಮಿಳುನಾಡಿನ ರೈತ ಮುಖಂಡರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಅವರು, ರೈತರ ಜೊತೆ ಅರ್ಥಪೂರ್ಣ ಚರ್ಚೆ ನಡೆಸಲಾಗಿದೆ, ಕೃಷಿಕರು ಹೊಸ ತಂತ್ರಜ್ಞಾನವನ್ನು ಬಳಸಿ ಉತ್ಪಾದಕತೆ ಹೆಚ್ಚಿಸಲು ಶ್ರಮಿಸುತ್ತಿದ್ದಾರೆ ಎಂದು ಶ್ಲಾಘಿಸಿದ್ದಾರೆ.

><><><><><><><><

ಸ್ಮಾರ್ಟ್ ಸಿಟಿ ಮಿಷನ್ ಅಡಿಯಲ್ಲಿ ಕೈಗೆತ್ತಿಕೊಂಡಿರುವ ಒಟ್ಟು ೮ ಸಾವಿರ ಯೋಜನೆಗಳ ಪೈಕಿ ಶೇಕಡ ೯೫ರಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ಎಂದು ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಲೋಕಸಭೆಯಲ್ಲಿಂದು ಹೇಳಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರ ಪ್ರಶ್ನೆಗೆ ಉತ್ತರಿಸಿದ ಸಚಿವರು, ೨೦೧೫ರಲ್ಲಿ ಆರಂಭವಾದ ಈ ಯೋಜನೆಯಡಿ ನೂರಾರು ನಗರಗಳಲ್ಲಿನ ಜನರ ಜೀವನಮಟ್ಟ ಸುಧಾರಣೆಗಾಗಿ ಹಲವು ಪ್ರಮುಖ ಸೇವೆಗಳನ್ನು ಒದಗಿಸಲಾಗುತ್ತಿದೆ. ನಗರವಾಸಿಗಳಿಗೆ ಅಗತ್ಯವಿರುವ ಮೂಲಸೌಕರ್ಯ ಅಭಿವೃದ್ಧಿ ಮತ್ತು ಸುಸ್ಥಿರ ಪರಿಹಾರಗಳನ್ನು ಕಂಡುಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

><><><><><><><><

ಅಶ್ಲೀಲ ದೃಶ್ಯಗಳನ್ನು ಪ್ರಸಾರ ಮಾಡುತ್ತಿದ್ದ ೪೩ ಒಟಿಟಿ ವೇದಿಕೆಗಳನ್ನು ನಿಷೇಧಿಸಲಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಲೋಕಸಭೆಗೆ ನೀಡಿರುವ ಲಿಖಿತ ಉತ್ತರದಲ್ಲಿ ಅವರು, ಸರ್ಕಾರ ಒಟಿಟಿ ವೇದಿಕೆಗಳಲ್ಲಿ ಬರುವ ನಕಾರಾತ್ಮಕ ಪರಿಣಾಮಗಳನ್ನು ಬೀರುವ ದೃಶ್ಯಗಳನ್ನು ತಡೆಯಲು ಮಾಹಿತಿ ತಂತ್ರಜ್ಞಾನ - ಇಂಟರ್ ಮೀಡಿಯರಿ ಮಾರ್ಗಸೂಚಿ ಮತ್ತು ಡಿಜಿಟಲ್ ಮಾದ್ಯಮ ನೈತಿಕ ಸಂಹಿತೆ ನಿಯಮ ೨೦೨೧ನ್ನು ಜಾರಿಗೊಳಿಸಲಾಗಿದೆ. ನಿಷೇಧಿಸಲ್ಪಟ್ಟ ಯಾವುದೇ ರೀತಿಯ ದೃಶ್ಯಗಳನ್ನು ಒಟಿಟಿ ವೇದಿಕೆಗಳಲ್ಲಿ ಪ್ರಸಾರ ಮಾಡಲು ನಿರ್ಬಂಧವಿದೆ ಎಂದು ಹೇಳಿದ್ದಾರೆ.

><><><><><><><><

ಮತದಾರರ ಪಟ್ಟಿ ಪರಿಷ್ಕರಣೆಗೆ ಪಾರದರ್ಶಕವಾಗಿ ನಡೆದಿದ್ದು, ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಿಲ್ಲ. ಇತ್ತೀಚೆಗೆ ಕಾಂಗ್ರೆಸ್ ನಾಯಕರಿಗೆ ಮತದಾರರ ಪಟ್ಟಿ ನೀಡಲಾಗಿದೆ. ೨೦೨೪ರ ನವೆಂಬರ್‌ನಲ್ಲಿ ಮತದಾರರ ಕರಡು ಪ್ರತಿಯನ್ನು ಸಹ ಒದಗಿಸಲಾಗಿದೆ ಎಂದು ಕರ್ನಾಟಕದ ಮುಖ್ಯ ಚುನಾವಣಾ ಅಧಿಕಾರಿ

ಅನ್ಬು ಕುಮಾರ್ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಕ್ಕೆ ಅವರು ಸಮಜಾಯಿಷಿ ನೀಡಿದ್ದಾರೆ. ರಾಹುಲ್ ಗಾಂಧಿ ಅವರು ನಾಳೆ ಬೆಂಗಳೂರಿನಲ್ಲಿ ಮತದಾರರ ಪಟ್ಟಿಯ ಲೋಪದೋಷಗಳ ಕುರಿತು ಪ್ರತಿಭಟನೆ ನಡೆಸುತ್ತಿರುವ ಹಿನ್ನೆಲೆಯಲ್ಲಿ ಅವರು, ಕಾಂಗ್ರೆಸ್ ನಾಯಕರಿಗೆ ಸಮಗ್ರ ಮಾಹಿತಿ ಒದಗಿಸಿದ್ದಾರೆ. ೨೦೨೫ರ ಜನವರಿಯಲ್ಲಿ ಅಂತಿಮ ಮತದಾರರ ಪಟ್ಟಿ ನೀಡಲಾಗಿದೆ. ಅಂತಿಮ ಮತದಾರರ ಪಟ್ಟಿ ಕೊಟ್ಟ ಮೇಲೆ ಕಾಂಗ್ರೆಸ್ ನಾಯಕರಿಂದ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗಿಲ್ಲ. ಚುನಾವಣಾಧಿಕಾರಿ ಮುಂದೆ ೨ನೇ ಹಂತದ ಆಕ್ಷೇಪಣೆ ಸಲ್ಲಿಸಿಲ್ಲ. ಇಷ್ಟೆಲ್ಲಾ ಗೊತ್ತಿದ್ದರೂ ಇಂದು ಸುದ್ದಿಗೋಷ್ಠಿಯಲ್ಲಿ ಮತದಾರರ ಪಟ್ಟಿ ಬಗ್ಗೆ ಆಕ್ಷೇಪಣೆ ಎತ್ತಿರುವುದು ಸರಿಯಲ್ಲ ಎಂದರು.

><><><><><><><

ಜಗದೀಪ್ ಧನಕರ್ ಅವರ ರಾಜೀನಾಮೆಯಿಂದ ತೆರವಾದ ಉಪರಾಷ್ಟ್ರಪತಿ ಸ್ಥಾನಕ್ಕೆ ಸೆಪ್ಟೆಂಬರ್ ೯ರಂದು ಚುನಾವಣೆ ನಡೆಯಲಿದ್ದು, ಈ ಸಂಬಂಧ ಚುನಾವಣಾ ಆಯೋಗ ಇಂದು ಅಧಿಸೂಚನೆ ಹೊರಡಿಸಿದೆ. ಇದರೊಂದಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಗೆ ಚಾಲನೆ ದೊರೆತಿದೆ. ಅಧಿಸೂಚನೆಯ ಪ್ರಕಾರ ನಾಮಪತ್ರ ಸಲ್ಲಿಸಲು ಇದೇ ೨೧ ಕೊನೆಯ ದಿನವಾಗಿದ್ದು, ೨೨ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರಗಳನ್ನು ಹಿಂಪಡೆಯಲು ಇದೇ ೨೫ ಕೊನೆಯ ದಿನವಾಗಿದೆ. ಸೆಪ್ಟೆಂಬರ್ ೯ರಂದು ನೂತನ ಉಪರಾಷ್ಟ್ರಪತಿ ಆಯ್ಕೆಗೆ ಬೆಳಿಗ್ಗೆ ೧೦ರಿಂದ ಸಂಜೆ ೫ರವರೆಗೆ ಮತದಾನ ನಡೆಯಲಿದೆ. ಮತದಾನ ಪ್ರಕ್ರಿಯೆ ಪೂರ್ಣಗೊಂಡ ನಂತರ ಅದೇ ದಿನ ಮತ ಎಣಿಕೆ ನಡೆಯಲಿದೆ.

><><><><><><><

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆ ನಡೆಸಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ. ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು, ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಸಮೀಕ್ಷೆಯನ್ನು ಡಿಜಿಟಲ್ ರೂಪದಲ್ಲಿ ಕೈಗೊಳ್ಳಲಾಗುವುದು. ಡಿಜಿಟಲ್ ವಿಧಾನದ ಸಮೀಕ್ಷೆಗೆ ತಂತ್ರಾಂಶದ ಅಭಿವೃದ್ಧಿ ಮತ್ತು ಉಸ್ತುವಾರಿಯನ್ನು ಇ-ಆಡಳಿತ ಇಲಾಖೆ ಮೂಲಕ ಕೈಗೊಳ್ಳಲಾಗುತ್ತಿದೆ ಎಂದರು. ಮೈಸೂರು, ಉತ್ತರ ಕನ್ನಡ, ವಿಜಯಪುರ, ಚಿಕ್ಕಬಳ್ಳಾಪುರ ಸೇರಿ ಕೆಲವು ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದು ಹೇಳಿದರು.

><><><><><><><

ತಮ್ಮ ನಿವಾಸದಲ್ಲಿ ಹಣ ಪತ್ತೆ ಪ್ರಕರಣದ ಬಗ್ಗೆ ತನಿಖೆ ನಡೆಸಲು ನೇಮಿಸಿದ್ದ ಆಂತರಿಕ ತನಿಖಾ ಸಮಿತಿಯ ವರದಿಯನ್ನು ಪ್ರಶ್ನಿಸಿ ಅಲಹಾಬಾದ್ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ಪ್ರಕರಣದ ವಿಚಾರಣೆ ನಡೆಸಿ, ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ ಮತ್ತು ಎ.ಜಿ.ಮಸಿಹ್ ಅವರನ್ನೊಳಗೊಂಡ ಪೀಠ ಇಂದು ಪ್ರಕಟಿಸಿದೆ. ನ್ಯಾಯಮೂರ್ತಿ ವರ್ಮಾ ಅವರು ತನಿಖಾ ಸಮಿತಿಯ ಮುಂದೆ ಹಾಜರಾಗಿ ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಿ, ಆನಂತರ ಆ ಸಮಿತಿ ವರದಿಯನ್ನೇ ಪ್ರಶ್ನಿಸಿರುವ ಅರ್ಜಿಯನ್ನು ಪುರಸ್ಕರಿಸಲಾಗದು. ಈ ವಿಚಾರದಲ್ಲಿ ಹಿಂದಿನ ಮುಖ್ಯ ನ್ಯಾಯಮೂರ್ತಿ ಹಾಗೂ ಸಮಿತಿ ಎಲ್ಲ

ನಿಯಮಗಳನ್ನು ಪಾಲನೆ ಮಾಡಿದೆ. ಹಾಗಾಗಿ, ವರ್ಮಾ ಅವರು, ಈಗ ವರದಿ ಪ್ರಶ್ನಿಸಿರುವುದನ್ನು ಮಾನ್ಯ ಮಾಡಲಾಗದು ಎಂದು ನ್ಯಾಯಪೀಠ ಹೇಳಿದೆ.

><><><><><><><

ಭಾರತದ ಜಾವಲಿನ್ ಪಟು ಅನ್ನು ರಾಣಿ, ಪೋಲೆಂಡ್ ನಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ವೈಸ್ಲಾವ್ ಮಾಣಿಕ್ ಸ್ಮಾರಕ ಪಂದ್ಯಾವಳಿಯಲ್ಲಿ ಚಿನ್ನದ ಪದಕ ಗಳಿಸಿದ್ದಾರೆ. ಅವರು, ೬೨.೫೯ ಮೀಟರ್ ದೂರ ಭರ್ಜಿಯನ್ನು ಎಸೆದು ಈ ಋತುಮಾನದಲ್ಲೇ ಅತ್ಯಧಿಕ ದೂರ ಎಸೆದ ದಾಖಲೆಯನ್ನು ನಿರ್ಮಿಸಿ, ಪದಕಕ್ಕೆ ಪಾತ್ರರಾದರು.

><><><><><><><